**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀಮತಿ ಹೇಮಲತಾ ನಾಯಕ್ ಇವರ ನಿಯಮ 330ರ ಗಮನ ಸೆಳೆಯುವ ಸೂಚನೆಗೆ ಉತ್ತರ**

**ಸೂಚನೆ:**

ಮಾದಿಗ ದಾಸರಿ ಸಮುದಾಯವು ರಾಜ್ಯದ ಅತಿ ಹಿಂದುಳಿದ ಸಮುದಾಯವಾಗಿದ್ದು, ಈ ಸಮುದಾಯದ ಜನರು ಹೆಚ್ಚಾಗಿ ಕಲ್ಯಾಣ ಕರ್ನಾಟಕ ಪ್ರದೇಶದಲ್ಲಿ ವಾಸಿಸುತ್ತಿದ್ದಾರೆ. ಕನ್ನಡ ಭಾಷೆ ಆಧಾರಿತ ನೂತನ ಕರ್ನಾಟಕ ಏಕೀಕರಣ ನಂತರ ರಾಜ್ಯದ ಜಾತಿ ಪಟ್ಟಿಯಲ್ಲಿ ನೊಂದಣಿಯಾಗದೆ ಈ ಹೆಸರು ಕೈ ಬಿಟ್ಟು ಹೋಗಿರುತ್ತದೆ, ಇದು ಈ ಸಮಾಜಕ್ಕೆ ದೊಡ್ಡ ಸಮಸ್ಯೆಯಾಗಿದೆ. ಇಂದಿಗೂ ಕೂಡ ಜಾತಿ ಪ್ರಮಾಣಪತ್ರ ಪಡೆಯಲು ತೊಂದರೆಯಾಗಿ ಸಮುದಾಯದ ಮಕ್ಕಳ ಶಿಕ್ಷಣ, ಉದ್ಯೋಗ, ಸೌಲಭ್ಯ ಪಡೆಯಲು ಅನಾನೂಕೂಲವಾಗಿದ್ದು ಸರ್ಕಾರದ ಸೌಲಭ್ಯಗಳಿಂದ ತಳಸಮುದಾಯ ಒಂದು ವಂಚಿತವಾಗುತ್ತಿದೆ. ಆದ್ದರಿಂದ ಕರ್ನಾಟಕ ರಾಜ್ಯದಲ್ಲಿ ಪರಿಶಿಷ್ಟ ಜಾತಿ ಪಟ್ಟಿಯಲ್ಲಿ ನೊಂದಾಯಿಸುವ ಸಲುವಾಗಿ ರಾಜ್ಯ ಸರ್ಕಾರದ ವತಿಯಿಂದ ಕೇಂದ್ರ ಸರ್ಕಾರಕ್ಕೆ ಸೂಕ್ತ ಶಿಫಾರಸ್ಸು ಪ್ರಸ್ತಾವನೆಯನ್ನು ಸಲ್ಲಿಸಲು ಕಾರ್ಯ ಪ್ರವೃತ್ತರಾಗಬೇಕೆಂದು ಈ ಮೂಲಕ ಒಕ್ಕೊರಲ ಒತ್ತಾಸೆಯಾಗಿದೆ. ಈ ವಿಷಯವನ್ನು ಸದನದಲ್ಲಿ ಪ್ರಸ್ತಾಪಿಸಬಯಸುತ್ತೇನೆ.

**ಉತ್ತರ:**

ಸಂವಿಧಾನ ಅನುಚ್ಛೇದ 341 (1) ರಂತೆ, ಭಾರತ ಸರ್ಕಾರದಿಂದ ಕರ್ನಾಟಕ ರಾಜ್ಯಕ್ಕೆ ಸಂಬಂಧಿಸಿದಂತೆ, ಒಟ್ಟು 101 ಜಾತಿಗಳನ್ನು ಪರಿಶಿಷ್ಟ ಜಾತಿ ಪಟ್ಟಿಯಲ್ಲಿ ಸೇರಿಸಲಾಗಿದೆ. ಸದರಿ ಪಟ್ಟಿಯಲ್ಲಿ ಮಾದಿಗ ದಾಸರಿ ಸಮುದಾಯ ಕರ್ನಾಟಕ ಪರಿಶಿಷ್ಟ ಜಾತಿ ಪಟ್ಟಿಯಲ್ಲಿ ಸೇರಿರುವುದಿಲ್ಲ.

ಯಾವುದೇ ಸಮುದಾಯವನ್ನು ಪರಿಶಿಷ್ಟ ಜಾತಿ ಪಟ್ಟಿಯಲ್ಲಿ ಸೇರಿಸಬೇಕಾದಲ್ಲಿ ಭಾರತದ ಸಂಸತ್‌ಗೆ ಮಾತ್ರ ಅಧಿಕಾರವಿರುತ್ತದೆ. ರಾಜ್ಯ ಸರ್ಕಾರ ಯಾವುದೇ ಜಾತಿಯನ್ನು ಸೇರಿಸುವ ಕುರಿತು ಶಿಫಾರಸ್ಸು ಮಾಡಲು ಅವಕಾಶವಿರುತ್ತದೆ. ಸದರಿ ಸಮುದಾಯವನ್ನು ಪರಿಶಿಷ್ಟ ಜಾತಿ ಪಟ್ಟಿಯಲ್ಲಿ ಸೇರಿಸುವ ಬಗ್ಗೆ ಮನವಿಗಳು ಸ್ವೀಕೃತವಾಗಿದ್ದು ಅದರಂತೆ, ಸದರಿ ಸಮುದಾಯದ ಬಗ್ಗೆ ಹಂಪಿ ವಿಶ್ವವಿದ್ಯಾಯಲಯದ ಮಾನವಶಾಸ್ತ್ರ ತಜ್ಞರಿಂದ ಕುಲಶಾಸ್ತ್ರೀಯ ಅಧ್ಯಯನ ಮಾಡಲು ಆದೇಶ ನೀಡಿದ್ದು, ಪ್ರಸ್ತುತ ಸದರಿ ವಿಶ್ವವಿದ್ಯಾಲಯದಿಂದ ಕುಲಶಾಸ್ತ್ರೀಯ ವರದಿಯನ್ನು ಸಲ್ಲಿಸಿದ್ದು, ಸದರಿ ವರದಿಯು ಸರ್ಕಾರದ ಪರಿಶೀಲನೆಯಲ್ಲಿರುತ್ತದೆ.

**ಸಕಇ 563 ಎಸ್‌ಎಲ್‌ಪಿ 2024**

(ಡಾ: ಹೆಚ್.ಸಿ.ಮಹದೇವಪ್ಪ)
ಸಮಾಜ ಕಲ್ಯಾಣ ಸಚಿವರು